17

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ____________________

ಪತ್ರಿಕೆಯ ಹೆಸರು : NAME OF THE NEWS PAPER: ____________________ ದಿನಾಂಕ : DATE : 12/6/2020

# ಡಿಕೆಶಿ ಪದಗ್ರಹಣಕ್ಕೆ ನಿಶಾನೆ

## ಯಾವಾಗ ಬೇಕಾದರೂ ಮಾಡಿಕೊಳ್ಳಲಿ ಎಂದ ಸಿಎಂ

ಬೆಂಗಳೂರು: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಪದಗ್ರಹಣದ ಪ್ರತಿಜ್ಞಾ ವಿಧಿ ಸಮಾರಂಭಕ್ಕೆ ಸಿಎಂ ಬಿ.ಎಸ್. ಯಡಿಯೂರಪ್ಪ ಹಸಿರು ನಿಶಾನೆ ತೋರಿಸುವುದರೊಂದಿಗೆ ವಿವಾದ ಸುಖಾಂತ್ಯ ಕಂಡಿದೆ. ಸಮಾರಂಭಕ್ಕೆ ಹೆಚ್ಚು ಜನ ಸೇರುತ್ತಾರೆಂಬ ಕಾರಣಕ್ಕೆ ಸರ್ಕಾರ ಮೂರು ಬಾರಿ ಅನುಮತಿ ನಿರಾಕರಿಸಿತ್ತು. ಇದರಿಂದ ಈ ವಿಷಯ ರಾಜಕೀಯಗೊಂಡಿತ್ತು. ಕಾಂಗ್ರೆಸ್ ಮುಖಂಡರು ಸಮಾರಂಭ ಮಾಡಿಯೇ ಸಿದ್ಧವೆಂದು ಪಟ್ಟು ಹಿಡಿದಿದ್ದರು. ಬುಧವಾರ ರಾತ್ರಿ ಯಡಿಯೂರಪ್ಪ ಹಾಗೂ ಡಿಕೆಶಿ ದೂರವಾಣಿಯಲ್ಲಿ ಮಾತನಾಡಿದ್ದರು.

**ದೇವೇಗೌಡರು ನನ್ನ ಬೆಂಬಲದಿಂದ ರಾಜ್ಯಸಭೆಗೆ ಹೋಗುತ್ತಿದ್ದಾರೆ ಎಂದು ಹೇಳಲು ನಾನು ಮುಟ್ಠಾಳನಲ್ಲ. ಅವರಿಗೆ ಅವರದೇ ಆದ ವ್ಯಕ್ತಿತ್ವ, ಹಿರಿತನವಿದೆ. ದೇವೇಗೌಡರನ್ನು ಬೆಂಬಲಿಸುವುದು ಪಕ್ಷದ ವರಿಷ್ಠರ ತೀರ್ಮಾನ.**



**ಪರಿಷತ್ ಚುನಾವಣೆಯಲ್ಲಿ ನಾನು ಯಾರಿಗೂ ಟಿಕೆಟ್ ಕೊಡುವುದಿಲ್ಲ. ಅದೇನಿದ್ದರೂ ಹೈಕಮಾಂಡ್ ನಿರ್ಧಾರ.**

**| ಡಿ.ಕೆ. ಶಿವಕುಮಾರ್** ಕೆಪಿಸಿಸಿ ಅಧ್ಯಕ್ಷ

ಗುರುವಾರ ವಿಧಾನಸೌಧದಲ್ಲಿ ಮಾತನಾಡಿದ ಸಿಎಂ, ಹೆಚ್ಚು ಜನ ಸೇರಿಸದೆ ಮುನ್ನೆಚ್ಚರಿಕೆ ತೆಗೆದುಕೊಳ್ಳುವುದಾಗಿ ಶಿವಕುಮಾರ್ ಹೇಳಿದ್ದಾರೆ. ಹಾಗಾಗಿ ಯಾವಾಗ ಬೇಕಾದರೂ ಕಾರ್ಯಕ್ರಮ ಮಾಡಿಕೊಳ್ಳಲಿ, ನಮ್ಮ ಅಭ್ಯಂತರವೇನೂ ಇಲ್ಲ ಎಂದರು.

**ಶೀಘ್ರ ಹೊಸ ದಿನಾಂಕ:** ಕಾರ್ಯಕ್ರಮಕ್ಕೆ ಸಿಎಂ ಅನುಮತಿ ನೀಡಿದ್ದಕ್ಕಾಗಿ ಧನ್ಯವಾದಗಳು. ಹೊಸ ದಿನಾಂಕವನ್ನು ಪಕ್ಷದ ನಾಯಕರೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಘೋಷಣೆ ಮಾಡಲಾಗುವುದು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.